



### ಐತಿಹಾಸಿಕ ಆನೆಗೊಂದಿ ಉತ್ಸವ-2024ಕ್ಕೆ ವಿದ್ಯುಕ್ತ ಚಾಲನೆ

# ಅಂಜನಾದ್ರಿ-ಅಯೋಧ್ಯೆ ರೈಲು ನಿಶ್ಚಿತ: ಶಿವರಾಜ ತಂಗಡಗಿ ವಿಶ್ವಾಸ

ಕೊಪ್ಪಳ ಮಾರ್ಚ್ : ನಿಶ್ಚಿತವಾಗಿಯು ಅಂಜನಾದ್ರಿಯಿಂದ ರೈಲೊಂದು ಅಯೋಧ್ಯೆಗೆ ಹೋಗಲೇಬೇಕು. ರಾಜ್ಯ ಸರ್ಕಾರವು ಅಭಿವೃದ್ಧಿಗೆ ಪೂರಕವಾಗಿದೆ. ಹೀಗಾಗಿ ಅಂಜನಾದ್ರಿ-ಅಯೋಧ್ಯೆ ರೈಲು ಯೋಜನೆಯ ಸಾಕಾರಕ್ಕೆ ಪ್ರಾಮಾಣಿಕವಾಗಿ ಸಹಕಾರ ನೀಡಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಗಂಗಾವತಿ ತಾಲೂಕಿನ ಆನೆಗೊಂದಿಯ ಉತ್ಸವ ಮೈದಾನದಲ್ಲಿ ಮಾರ್ಚ 11ರಂದು ನಡೆದ ಐತಿಹಾಸಿಕ ಆನೆಗೊಂದಿ ಉತ್ಸವ-2024 ಉದ್ಘಾಟಿಸಿ ಅವರು ಅವರು ಮಾತನಾಡಿದರು.ಅಖಂಡ ಗಂಗಾವತಿ ತಾಲೂಕು ಭತ್ತದ ಕಣಜವಾಗಿದೆ. ಈ ಭಾಗಕ್ಕೆ ರೈಸ್ ಟೆಕ್ನಾಲಜಿ ಪಾರ್ಕ್ ಅಗತ್ಯವಾಗಿದೆ. ಭತ್ತದಿಂದ ನಾವು ಬೇರೆ ಬೇರೆ ಉತ್ಪನ್ನ ಮಾಡಲು ಇಲ್ಲಿ ಅವಕಾಶವಿದೆ ಎಂದು ಭಾವಿಸಿ ರೈಸ್ ಟೆಕ್ನಾಲಜಿ ಪಾರ್ಕ್ ಆರಂಭದ ಸಾಹಸಕ್ಕೆ ಕೈ ಹಾಕಿದ್ದೇವೆ. ರೈಸ್ ಟೆಕ್ನಾಲಜಿ ಪಾರ್ಕ್ಗೆ ಯೋಜಿಸಿದ್ದೇವೆ. ಇದಕ್ಕಾಗಿ 357 ಎಕರೆ ಭೂಮಿ ಮತ್ತು 157 ಕೋಟಿ ರೂ ಕೊಟ್ಟಿದ್ದೇವೆ. ಇದು ಇನ್ನು ಅಭಿವೃದ್ಧಿ ಆಗಬೇಕಿದೆ. ಇದಕ್ಕೆ ಕೇಂದ್ರ ಸರ್ಕಾರದ ಸಹಕಾರ ಬೇಕು ಎಂದು ಸಚಿವರು ತಿಳಿಸಿದರು.ಕೊಪ್ಪಳ ಜಿಲ್ಲೆಯು ಐತಿಹಾಸಿಕವಾಗಿ ವಿಶೇಷತೆ ಹೊಂದಿದೆ. ಕನಕಗಿರಿಯ ಶ್ರೀ ಕಣಕಾಚಲಪತಿ ದೇವಾಲಯ, ಗಂಗಾವತಿಯ ಅಂಜನಾದ್ರಿ, ಕುಕನೂರಿನ ಮಹಾದೇವಾಲಯ ಹೀಗೆ ಹಲವಾರು ವಿಶೇಷತೆಗಳ ಪಟ್ಟಿಯು ಬೆಳೆಯುತ್ತದೆ. ವಿಜಯನಗರ ಅರಸರ ಕಾಲದ ರಾಜಧಾನಿಯಲ್ಲಿ ನಾವು ಈ ಉತ್ಸವ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ಆನೆಗೊಂದಿ ಅಂದರೆ ಅದು ಬರೀ ಕೊಪ್ಪಳಕ್ಕೆ ಸೀಮಿತವಾಗಿಲ್ಲ; ಆನೆಗೊಂದಿ ಅಂಜನಾದ್ರಿ ಇಡೀ ರಾಜ್ಯಕ್ಕೆ ಚಿರಪರಿಚಿತವಾಗಿವೆ. ಬರೀ ಉತ್ಸವ ಆದರೆ ಸಾಲದು. ಇಲ್ಲಿನ ನಿಜವಾದ ಇತಿಹಾಸವನ್ನು ನಮ್ಮ ಯುವಪೀಳಿಗೆಗೆ ತಿಳಿಸುವ ಕಾರ್ಯವಾಗಬೇಕಿದೆ ಎಂದು ಸಚಿವರು ಹೇಳಿದರು.ನಾವೆಲ್ಲರೂ ನೋಡಿ ಕಲಿಯುವಂತಹ ಆಡಳಿತವನ್ನು ಶ್ರೀರಂಗದೇವ ರಾಯಲು ಅವರು ಮಾಡಿದರು. ಶ್ರೀರಂಗದೇವ ರಾಯಲು ಅವರ ಪಕ್ಷನಿಷ್ಠೆ ನಮಗೆ ಆದರ್ಶಪ್ರಾಯವಾಗಿದೆ. ಅಂತಹ ಮಹನಿಯರಾದ ಹಿರಿಯರಾದ ಶ್ರೀರಂಗದೇವರಾಯಲು ಅವರ ಹೆಸರನ್ನು ಆನೆಗೊಂದಿ ಉತ್ಸವದ ಭವ್ಯ ವೇದಿಕೆಗೆ ಇಟ್ಟಿರುವುದು ಅತ್ಯಂತ ಅರ್ಥಪೂರ್ಣವಾಗಿದೆ. ಇದಕ್ಕಾಗಿ ಶಾಸಕರಾದ ಜನಾರ್ಧನ ರೆಡ್ಡಿ ಅವರಿಗೆ ಮತ್ತು ಜಿಲ್ಲಾಡಳಿತಕ್ಕೆ ತಾವು ಅಭಿನಂದನೆ ಸಲ್ಲಿಸುವುದಾಗಿ ಸಚಿವರು ಹೇಳಿದರು.ಅಂಜನಾದ್ರಿ ಅಭಿವೃದ್ಧಿಗೆ ಬದ್ಧ: ಇಡೀ ದೇಶದ ಜನರು ಗಂಗಾವತಿ ತಾಲೂಕಿನ ಅಂಜನಾದ್ರಿಯ ಕಡೆಗೆ ನೋಡುವ ಹಾಗೆ ನಾವು ಅಂಜನಾದ್ರಿಯನ್ನು ಅಭಿವೃದ್ಧಿಪಡಿಸುತ್ತೇವೆ. ಸಂಸದರು ಮತ್ತು ಶಾಸಕರ ಸಹಕಾರ ಪಡೆದು ಈ ಕಾರ್ಯ ಮಾಡುತ್ತೇವೆ ಎಂದು ಸಚಿವರು ಹೇಳಿದರು.

ಜಿಲ್ಲಾಧಿಕಾರಿಗಳು, ಜಿಪಂ ಸಿಇಓ ಅವರಿಗೆ ಅಭಿನಂದನೆ: ಆನೆಗೊಂದಿ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಸ್ವಾಗತ ಭಾಷಣ ಮಾಡಿದ ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಪಾಂಡೆಯ ಮತ್ತು ಪ್ರಾಸ್ತಾವಿಕ ಮಾತನಾಡಿದ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರ ಕನ್ನಡದಲ್ಲಿನ ಭಾಷಣದ ಬಗ್ಗೆ ವಿಷಯ ಪ್ರಸ್ತಾಪಿಸಿದ ಸಚಿವರು, ಬೇರೆ ಬೇರೆ ಪ್ರದೇಶಗಳಿಂದ ಬಂದಿರುವ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಅವರು ಪ್ರಯತ್ನ ಮಾಡಿ ಕನ್ನಡದಲ್ಲಿ ಸ್ವಾಗತ ಭಾಷಣ ಮತ್ತು ಪ್ರಾಸ್ತಾವಿಕ ಮಾತುಗಳನ್ನಾಡಿರುವುದು ನಿಜಕ್ಕೂ ಅಭಿನಂದನೆಯ ಸಂಗತಿ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವನಾಗಿ ಅವರಿಗೆ ಅಭಿನಂದನೆ ತಿಳಿಸುವುದಾಗಿ ಅವರು ಹೇಳಿದರು. ರಾಜಕೀಯ ಬೇಡ : ಕೊಪ್ಪಳ, ಕುಷ್ಟಗಿ, ಕನಕಗಿರಿ, ಕಾರಟಗಿ, ಗಂಗಾವತಿ, ಯಲಬುರ್ಗಾ, ಕುಕನೂರ ತಾಲೂಕಿನ ಜನರ ಋಣ ನಾವೆಲ್ಲರೂ ತೀರಿಸಬೇಕು. ಇದಕ್ಕಾಗಿ ನಾವೆಲ್ಲರೂ ಒಂದಾಗಿ ಹೋಗೋಣ. ಅಭಿವೃದ್ಧಿಯ ವಿಷಯದಲ್ಲಿ ರಾಜಕೀಯ ಮಾಡುವುದು ಬೇಡ ಎಂದು ಸಚಿವರು ಹೇಳಿದರು. ಸಂಸದರಾದ ಕರಡಿ ಸಂಗಣ್ಣ, ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ದೊಡ್ಡನಗೌಡ ಪಾಟೀಲ ಅವರು ಮಾತನಾಡಿದರು. ಶಾಸಕರಾದ ಜನಾರ್ಧನ ರೆಡ್ಡಿ ಅವರು ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಪ್ರಾಸ್ತಾವಿಕ ಮಾತನಾಡಿದರು. ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಪಾಂಡೆಯ ಸ್ವಾಗತ ಮಾತುಗಳನ್ನಾಡಿದರು.

ಸಮಾರಂಭದಲ್ಲಿ ರಾಜವಂಶಸ್ಥರಾದ ಲಲಿತಾ ರಾಣಿ ಶ್ರೀರಂಗದೇವರಾಯಲು, ಶಾಸಕರಾದ ಜನಾರ್ಧನ ರೆಡ್ಡಿ ಅವರ ಧರ್ಮಪತ್ನಿ ಅರುಣಾ ಲಕ್ಷ್ಮಿ ?ಮ ಜನಾರ್ಧನ ರೆಡ್ಡಿ, ಆನೆಗೊಂದಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಕೆ.ಮಹಾದೇವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಮುಖಂಡರಾದ ಶ್ರೀನಾಥ ಬಿ., ಮಲ್ಲಿಕಾರ್ಜುನ ನಾಗಪ್ಪನವರ, ರಾಜಶೇಖರ ಹಿಟ್ನಾಳ, ವಿರುಪಾಕ್ಷಪ್ಪ ಸಿಂಗನಾಳ, ಹನುಮಂತಪ್ಪ ನಾಯಕ ಹಾಗೂ ಇತರರು ಇದ್ದರು.

## ಆನೆಗೊಂದಿಯು ಪುಣ್ಯಭೂಮಿ, ಪೂಜ್ಯನೀಯ ಸ್ಥಳ:ಕರಡಿ ಸಂಗಣ್ಣ

ಕೊಪ್ಪಳ ಮಾರ್ಚ್: ಆನೆಗೊಂದಿಯು ಪುಣ್ಯಭೂಮಿ, ಪೂಜ್ಯನೀಯ ಸ್ಥಳವಾಗಿದೆ. ಇಟಗಿ ಮಹಾದೇವಾಲಯ, ಹುಲಗಿ ದೇವಸ್ಥಾನ ಹೀಗೆ ಧಾರ್ಮಿಕ ತಾಣಗಳ ಬಗ್ಗೆ ನೋಡಿದಾಗ ದೇವ ರನಾಡು ಎಂದು ಕರೆಯುವಷ್ಟು ಕೊಪ್ಪಳ ಜಿಲ್ಲೆಯು ಧಾರ್ಮಿಕ ಮಹತ್ವ ಹೊಂದಿದೆ ಎಂದು ಸಂಸದರಾದ ಕರಡಿ ಸಂಗಣ್ಣ ಅವರು ಹೇಳಿದರು.ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಗಂಗಾವತಿ ತಾಲೂಕಿನ ಆನೆಗೊಂ ದಿಯ ಉತ್ಸವ ಮೈದಾನದಲ್ಲಿ ಮಾರ್ಚ 11ರಂದು ನಡೆದ ಐತಿಹಾಸಿಕ ಆನೆಗೊಂದಿ ಉತ್ಸವದ ಉದ್ಘಾ ಟನಾ ಸಮಾರಂಭದಲ್ಲಿ ಅವರು ಮಾತನಾಡಿದರು. ಇದು ಸಂಭ್ರಮದ ದಿನವಾಗಿದೆ. ನಾವು ಇತಿಹಾಸ ತಿಳಿಯಬೇಕು. ಅದರಂತೆ ನಾವು ಐತಿಹಾಸಿಕ ಆನೆಗೊಂದಿ ಉತ್ಸವಕ್ಕೆ ಸಾಕ್ಷಿಯಾಗಿದ್ದೇವೆ. ಇಲ್ಲಿ ಕಾಣುವ ಬೆಟ್ಟ ಗುಡ್ಡಗಳು ಹಲವಾರು ಈತಿಹ್ಯಗಳಿಗೆ ಸಾಕ್ಷಿಯಾಗಿವೆ ಎಂದರು.ಸಚಿವರಾದ ಶಿವರಾಜ ತಂಗಡಗಿ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಮೇಲೆ ಜಿಲ್ಲೆಯಲ್ಲಿ ಕನಕಗಿರಿ ಉತ್ಸವ ಮತ್ತು ಆನೆಗೊಂದಿ ಉತ್ಸವ ಎರಡು ಉತ್ಸವ ಮಾಡಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು. ನಾವು ಆನೆಗೊಂದಿ ಇತಿಹಾಸದ ಬಗ್ಗೆ ಅರಿಯಬೇಕು. ರಾಮಾಯಣದ ಕುರುಹುಗಳು ಇಲ್ಲಿವೆ. ನಮ್ಮ ಜಿಲ್ಲೆ ಆಂಜನೇಯನ ಜನ್ಮಸ್ಥಳ ಎಂದು ಹೇಳಲು ಹೆಮ್ಮೆ ಅನಿಸುತ್ತದೆ ಎಂದರು. ಗಂಗಾವತಿ-ಅಯೋಧ್ಯೆ ರೈಲು ಆರಂಭಕ್ಕೆ ಒತ್ತಾಯ ಮಾಡಲಾಗುತ್ತಿದೆ. ಗಂಗಾವತಿ ರೈಲು ನಿಲ್ದಾಣದಿಂದ ಅಂಜನಾದ್ರಿವರೆಗೆ ರೋಪ್ ವೇ ಮಾಡಬೇಕು ಎಂಬುದು ನಮ್ಮ ಕನಸಾಗಿದೆ. ಇದಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಎಲ್ಲ ಶಾಸಕರು ಸಹಕಾರ ನೀಡಬೇಕು ಎಂದು ಸಂಸದರು ಕೋರಿದರು.ವಿಜಯನಗರ ಅರಸರು ದೂರದೃಷ್ಟಿಯ ನೀರಾವರಿ ಕಾಲುವೆಯ ಯೋಜನೆ ಹೊಂದಿದ್ದರು. ಅವರ ಪರಿಕಲ್ಪನೆಯನ್ನು ಇವತ್ತಿಗೂ ನಾವು ಅನುಕರಣೆ ಮಾಡುತ್ತಿದ್ದೇವೆ ಎಂದು ಸಂಸದರು ತಿಳಿಸಿದರು.

## ಅಂಜನಾದ್ರಿಯು ತಿರುಪತಿ, ಅಯೋಧ್ಯೆಯಂತಾಗಲಿದೆ: ಜನಾರ್ಧನ ರೆಡ್ಡಿ

ಕೊಪ್ಪಳ ಮಾರ್ಚ್ : ಚಾರಿತ್ರಿ?ಯಕ ಹಿನ್ನೆಲೆಯ ಈ ಪುಣ್ಯಭೂಮಿಯಲ್ಲಿ ತಾವು ಶಾಸಕರಾಗಿರುವುದು ತಮ್ಮ ಪೂರ್ವಜನ್ಮದ ಪುಣ್ಯದ ಫಲವಾಗಿದೆ ಎಂದು ತಾವು ಭಾವಿಸಿರುವುದಾಗಿ ಗಂಗಾವತಿ ವಿಧಾನಸಭಾ ಕೇತ್ರದ ಶಾಸಕರಾದ ಜಿ ಜನಾರ್ಧನ ರೆಡ್ಡಿ ಅವರು ಹೇಳಿದರು. ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಗಂಗಾವತಿ ತಾಲೂಕಿನ ಆನೆಗೊಂದಿಯ ಉತ್ಸವ ಮೈದಾ ನದಲ್ಲಿ ಮಾರ್ಚ 11ರಂದು ನಡೆದ ಐತಿಹಾಸಿಕ ಆನೆಗೊಂದಿ ಉತ್ಸವದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಆನೆಗೊಂದಿಯ ಈ ಪ್ರದೇಶವು ಹಕ್ಕ-ಬುಕ್ಕರು ಸ್ಥಾಪಿಸಿದ ಪುಣ್ಯಭೂಮಿಯಾಗಿದೆ. ಹನುಮ ಜನಿಸಿದ ತಾಯಿ ನಾಡು ತಮ್ಮದು ಎಂದು ಹೇಳಲು ತಮಗೆ ಹೆಮ್ಮೆಯ ಅನಿಸುತ್ತದೆ ಎಂದರು.

ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಇತ್ತೀಚೆಗೆ ಮಂಡಿಸಿದ ಬಜೆಟ್‌ನಲ್ಲಿ ಅಂಜನಾದ್ರಿಗೆ 100 ಕೋಟಿ ರೂ. ಮೀಸಲಿರಿಸಿದ್ದಾರೆ. ಪ್ರತಿ ವರ್ಷ ಸಹ ಅಂಜನಾದ್ರಿಗೆ 100 ಕೋಟಿ ರೂ ಕೊಡುವುದಾಗಿ ಮತ್ತು ಅದರಿಂದ ಅಂಜನಾದ್ರಿ ಅಭಿವೃದ್ಧಿಪಡಿಸಿ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದು ಅಭಿನಂದನಾರ್ಹ ಸಂಗತಿ ಎಂದು ಹೇಳಿದರು.

ತಮ್ಮ ಅವಧಿಯಲ್ಲಿ ಅಂಜನಾದ್ರಿಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಹೇಳಿದ ಶಾಸಕರು, ಅಂದಾಜು 5 ಕೋಟಿ ರೂ. ವೆಚ್ಚದಲ್ಲಿ ಹನುಮಂತನ ಪಾದಗಟ್ಟೆಯ ಅಭಿವೃದ್ಧಿ, 30 ಕೋಟಿ ರೂ. ವೆಚ್ಚದಲ್ಲಿ ಅಂಜನಾದ್ರಿಯ ಮೆಟ್ಟಿಲುಗಳ ನಿರ್ಮಾಣ, ಮೂಲ ದೇವಾಲಯ ಉಳಿಸಿಕೊಂಡು ತಿರುಪತಿ ಮಾದರಿಯಲ್ಲಿ ಬೆಟ್ಟದ ಮೇಲೆ ದೇವಾಲಯ ಅಭಿವೃದ್ಧಿಗೆ ಕಾರ್ಯ ಯೋಜನೆ, 8 ಕೋಟಿ ರೂ. ವೆಚ್ಚದಲ್ಲಿ ಪ್ರದರ್ಶನ ಪಥ ನಿರ್ಮಾಣ, ಬೆಟ್ಟದ ಸುತ್ತಲು ಪ್ಲಾಂಟೇಶನ್, 21 ಕೋಟಿ ರೂ.ವೆಚ್ಚದಲ್ಲಿ ಶಾಪಿಂಗ್ ಕಾಂಪ್ಲೆಕ್ಸ್ ನಿರ್ಮಾಣ, 5000 ಜನರು ಒಂದೇ ಭಾರಿಗೆ ಪ್ರಸಾದ ಸವಿಯುವುದಕ್ಕೆ ಅವಕಾಶವಿರುವಂತೆ ಕಟ್ಟಡ ವ್ಯವಸ್ಥೆ ಸೇರಿದಂತೆ ಈಗ ಬಿಡುಗಡೆಯಾದ ಅನುದಾನದಲ್ಲಿ ಹಂತಹಂತವಾಗಿ ಅಂಜನಾದ್ರಿಯನ್ನು ಅಭಿವೃದ್ಧಿಪಡಿಸುವುದಾಗಿ ಶಾಸಕರು ಹೇಳಿದರು.ಸಾಕಷ್ಟು ಹೆಸರು ಮಾಡಿದ ತಿರುಪತಿ, ಅಯೋಧ್ಯೆಯಂತೆ ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಅವರು ತಿಳಿಸಿದರು. ಅಂಜನಾದ್ರಿ ಅಭಿವೃದ್ಧಿಗೆ ಸಾಕಷ್ಟು ಶ್ರಮವಹಿಸಬೇಕು. ಇದಕ್ಕೆ ಸಾಕಷ್ಟು ಸಮಯವಕಾಶ ಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಿದರು.ದಕ್ಷಿಣ ಭಾರತದಲ್ಲೇ ಮೊದಲ ಬಾರಿಗೆ ರೋಪ್ ವೇ ನಿರ್ಮಾಣ ಕಾರ್ಯ ನಮ್ಮಲ್ಲಿ ಆಗಲಿದೆ. ಈ ಬಗ್ಗೆ ತಾವು ನಿರಂತರ ಪ್ರಯತ್ನ ಮಾಡುತ್ತಿರುವುದಾಗಿ ಹೇಳಿದರು.

ಭಾವುಕರಾದ ಶಾಸಕರು : ತಾವು ಜನಿಸಿದ್ದು ಬಳ್ಳಾರಿ ಜಿಲ್ಲೆಯಾದರು ಸಹ ಗಂಗಾವತಿಯಲ್ಲಿ ನೆಲೆಸಲು ತಮಗೆ ಸಂತಸವಾಗುತ್ತದೆ ಎಂದ ಶಾಸಕರು, ಶ್ರೀ ಹನುಮನ ಪಾದ ಹಿಡಿದುಕೊಳ್ಳಲು ಶ್ರೀರಾಮಚಂದ್ರನೇ ತಮಗೆ ಗಂಗಾವತಿ ಅಂಜನಾದ್ರಿಗೆ ಕಳುಹಿಸಿದ್ದಾನೆ ಎಂದು ಭಾವಿಸಿದ್ದಾಗಿ ಹೇಳುತ್ತ ಶಾಸಕರು ಭಾವುಕರಾದರು. ಗಂಗಾವತಿಗೆ ಬಂದು ಶಾಸಕನಾಗಿ ಭಗವಂತನ ಸೇವೆ ಮಾಡುತ್ತಿದ್ದೇನೆ ಎಂದು ತಿಳಿಸಿದರು.

ಸಚಿವರ ಸಹಕಾರ ಮರೆಯಲಾರೆ : ಆನೆಗೊಂದಿ ಉತ್ಸವ ಆಗಬೇಕು ಎಂದು ಹೇಳಿ ಉತ್ಸವ ನಡೆಸಲು ಅನುದಾನ ನೀಡಿ ಪ್ರೇರಣೆ ನೀಡಿದ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರ ಮತ್ತು ಉತ್ಸವಕ್ಕೆ ಅನುದಾನ ನೀಡಿ ಸಹಕರಿಸಿದ ಹೆಚ್.ಕೆ.ಪಾಟೀಲ ಅವರ ಸಹಕಾರವನ್ನು ತಾವು ಸ್ಮರಿಸುವುದಾಗಿ ಶಾಸಕರಾದ ಜನಾರ್ಧನ ರೆಡ್ಡಿ ಅವರು ಹೇಳಿದರು.

## ಊರ ಹಬ್ಬದಂತೆ ಆನೆಗೊಂದಿ ಉತ್ಸವ ಮಾಡಿದ್ದೇವೆ: ನಲಿನ್ ಅತುಲ್

ಕೊಪ್ಪಳ ಮಾರ್ಚ್ : ಆನೆಗೊಂದಿ ಉತ್ಸವ ಆಚರಣೆಯನ್ನು ಜಿಲ್ಲಾಡಳಿತವು ಊರ ಹಬ್ಬದ ರೀತಿಯಲ್ಲಿ ಆಚರಿಸುತ್ತಿದೆ ಎಂದು ಹೇಳಲು ಹೆಮ್ಮೆ ಅನಿಸುತ್ತದೆ. ಕಡಿಮೆ ಅವಧಿಯಲ್ಲಿ ದೊಡ್ಡ ಮಟ್ಟದಲ್ಲಿ ನಾವು ಈ ಉತ್ಸವವನ್ನು ನಡೆಸಿದ್ದೇವೆ ಎಂದು ಆನೆಗೊಂದಿ ಉತ್ಸವ-2024ರ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಹೇಳಿದರು.

ಗಂಗಾವತಿ ತಾಲೂಕಿನ ಆನೆಗೊಂದಿಯ ಉತ್ಸವ ಮೈದಾನದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಮಾರ್ಚ 11ರಂದು ನಡೆದ ಐತಿಹಾಸಿಕ ಆನೆಗೊಂದಿ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಅವರು ಪ್ರಾಸ್ತಾವಿಕ ಮಾತನಾಡಿದರು.

ಆನೆಗೊಂದಿ ಸುಂದರವಾದ ಗ್ರಾಮ. ನದಿ, ಸರೋವರ, ಭತ್ತದ ಗದ್ದೆಗಳು, ಕಬ್ಬು, ಬಾಳೆ, ತೆಂಗು, ಮಾವು ಬೆಳೆಗಳಿಂದ ಎಲ್ಲಾ ಕಡೆಗೆ ಯಾವಾಗಲು ಹಚ್ಚ ಹಸಿರು ಕಾಣುತ್ತದೆ. ಈ ಆನೆಗೊಂದಿ ಗ್ರಾಮವು ಪಕ್ಕದ ವಿಜಯನಗರ ಅರಸರ ಕಾಲದಲ್ಲಿ ಪ್ರಥಮ ರಾಜಧಾನಿಯಾಗಿ ಮೆರೆದ ಪ್ರದೇಶ ಎಂಬುದು ಕೊಪ್ಪಳ ಜಿಲ್ಲೆಯ ಜನತೆಗೆ ಹೆಮ್ಮೆಯ ಸಂಗತಿಯಾಗಿದೆ. ವಿಶ್ವದ ಚರಿತ್ರೆಯಲ್ಲಿ ಐತಿಹಾಸಿಕವಾಗಿ ಹೆಸರಾಗಿರುವ ಹಂಪಿಯು ವಿಶ್ವ ಪರಂಪರೆಯ ಸ್ಥಳಗಳಲ್ಲಿ ಒಂದಾಗಿದೆ. ಈ ಹಂಪಿಯ ಬಳಿಯ ತುಂಗಭದ್ರಾ ನದಿಯ ದಡದ ಮೇಲಿರುವ ಆನೆಗೊಂದಿಯು ಹಂಪಿಯಷ್ಟೇ ಎಲ್ಲರ ಗಮನ ಸೆಳೆಯುವ ಪ್ರದೇಶವಾಗಿದೆ. ನಮ್ಮೆದುರಿಗೆ ಇಲ್ಲಿ ಕಾಣುವ ನದಿ, ಸರೋವರ, ಬೆಟ್ಟ, ಗುಡ್ಡಗಳೇ ಇದಕ್ಕೆ ಸಾಕ್ಷಿಯಾಗಿದೆ. ಈ ಆನೆಗೊಂದಿಯಲ್ಲಿ ಈ ಹಿಂದೆ ಶಾತವಾಹನರು ಸೇರಿದಂತೆ ಅನೇಕ ರಾಜರು ಆಡಳಿತ ನಡೆಸುವಾಗ ಈ ಪ್ರದೇಶವು ರಾಜಧಾನಿಯಾಗಿತ್ತು. ಬೇರೆ ಬೇರೆ ಧರ್ಮದ ದೇವಾಲಯಗಳು, ಗಮನ ಸೆಳೆಯುವ ಶಿಲ್ಪ ಕಲೆಗಳು, ಕೋಟೆ ಸೇರಿದಂತೆ ಅನೇಕ ವಿಶೇಷತೆಗಳನ್ನು ಹೊಂದಿರುವ ಈ ಪ್ರದೇಶವು ಪ್ರಸಿದ್ಧ ವಿಜಯನಗರ ಇತಿಹಾಸದಲ್ಲಿ ಆನೆಗೊಂದಿಯ ಮಹತ್ವವನ್ನು ತಿಳಿಸುತ್ತದೆ ಎಂದರು.

ಆನೆಗೊಂದಿಯ ಪ್ರವೇಶ ದ್ವಾರ, ಆನೆಗೊಂದಿ ಗ್ರಾಮ, ಇಲ್ಲಿನ ಗಗನ ಮಹಲ್, ಆಶ್ರಮಗಳು, ಜೈನ ಮಂದಿರ, ಸೆರೆ ಮನೆ, ರಂಗನಾಥ ದೇವಾಲಯ, ಪಂಪಾ ಸರೋವರ, ಆನೆಗೊಂದಿ ಕೋಟೆ, 64 ಕಂಬಗಳ ಮಂಟಪ, ಅಂಜನಾ ಬೆಟ್ಟ, ಹನುಮಾನ ಸೇತುವೆ ಎಲ್ಲವನ್ನು ಮತ್ತೆ ಮತ್ತೆ ನೋಡಬೇಕು ಅನಿಸುತ್ತದೆ. ಇಂತಹ ಐತಿಹಾಸಿಕ ತಾಣಗಳಿಂದ ಕೊಪ್ಪಳ ಜಿಲ್ಲೆಯ ಪರಂಪರೆಯು ದೊಡ್ಡದು ಎಂಬುದಕ್ಕೆ ಸಾಕ್ಷಿಯಾಗಿದೆ. ಇಂತಹ ಹಿನ್ನೆಲೆಯ ಆನೆಗೊಂದಿಯ ರಾಜಕೀಯ, ಪಾರಂಪರಿಕ ವಿಷಯಗಳನ್ನು ಜನರಿಗೆ ತಿಳಿಸುವ ಉದ್ದೇಶದಿಂದ ಆನೆಗೊಂದಿ ಉತ್ಸವವನ್ನು ಪ್ರತಿ ವರ್ಷ ಆಚರಿಸಲಾಗುತ್ತದೆ. ಈ ಆನೆಗೊಂದಿ ಉತ್ಸವವನ್ನು ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾಡಳಿತದಿಂದ 1998ರಿಂದ ಆಚರಿಸಿಕೊಂಡು ಬರಲಾಗುತ್ತಿದೆ. ನಮ್ಮ ಅವಧಿಯಲ್ಲಿ ಇಂತಹ ಐತಿಹಾಸಿಕ ಉತ್ಸವವನ್ನು ಆಚರಣೆ ಮಾಡಲು ಅವಕಾಶ ಸಿಕ್ಕಿರುವುದು ನಮ್ಮ ಭಾಗ್ಯ ಎಂದು ಭಾವಿಸಿದ್ದೇನೆ ಎಂದು ತಿಳಿಸಿದರು.

ಜಿಲ್ಲಾಡಳಿತವು ಈ ಉತ್ಸವದ ಕಾರ್ಯವನ್ನು ಅಚ್ಚುಕಟ್ಟಾಗಿ ಮಾಡಿದೆ. ದಾಖಲೆಯ ರೀತಿಯಲ್ಲಿ ಜನರು ಸೇರಿ ಕನಕಗಿರಿ ಉತ್ಸವವನ್ನು ಜಿಲ್ಲಾಡಳಿತವು ಯಶಸ್ವಿಗೊಳಿಸಿದೆ. ಕನಕಗಿರಿ ಉತ್ಸವ ಮುಕ್ತಾಯಗೊಂಡ ಮರುದಿನದಿಂದಲೇ ನಾವು ಮತ್ತೆ ಆನೆಗೊಂದಿ ಉತ್ಸವದ ಕೆಲಸ ಕಾರ್ಯ ಮಾಡಿದ್ದೇವೆ. ಈ ಕಾರ್ಯಕ್ರಮಕ್ಕೆ ದೊಡ್ಡ ಸಂಖ್ಯೆಯಲ್ಲಿ ತಾವು ಇಲ್ಲಿ ಸೇರಿ ಈ ಉತ್ಸವವನ್ನು ಯಶಸ್ವಿ ಮಾಡಿದ್ದೀರಿ. ತಮಗೆ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆಯಿಂದ ಹಾರ್ದಿಕ ವಂದನೆಗಳನ್ನು ತಿಳಿಸುತ್ತೇನೆ ಎಂದರು.

ಉತ್ಸವದ ಹಿನ್ನೆಲೆಯಲ್ಲಿ 18 ಸಮಿತಿಗಳನ್ನು ರಚಿಸಿ ಕೆಲಸ ಮಾಡಿದ್ದೇವೆ. ಆ ಸಮಿತಿಯಲ್ಲಿ ಶ್ರಮದಿಂದ ಕೆಲಸ ಮಾಡಿದ ಸಮಿತಿಯಲ್ಲಿನ ಎಲ್ಲ ಅಧಿಕಾರಿಗಳಿಗೆ ಜಿಲ್ಲಾಡಳಿತದಿಂದ ಅಭಿನಂದನೆ ತಿಳಿಸುತ್ತೇನೆ. ವಿಶೇಷವಾಗಿ ಪ್ರವಾಸೋದ್ಯಮ ಇಲಾಖೆಗೆ ವಿಶೇಷ ಧನ್ಯವಾದಗಳನ್ನು ತಿಳಿಸುತ್ತೇನೆ. ನಮ್ಮ ಕೊಪ್ಪಳ ಜಿಲ್ಲೆಯು ಬಹಳಷ್ಟು ವಿಶೇಷತೆ ಹೊಂದಿದೆ. ಸಾಕಷ್ಟು ಐತಿಹಾಸಿಕ ಪ್ರದೇಶಗಳು ಇಲ್ಲಿವೆ. ಆ ಎಲ್ಲ ಪ್ರದೇಶಗಳ ಪೋಟೊಗಳನ್ನು ಜಿಲ್ಲೆಯ ಎಲ್ಲ ಕಡೆಗಳಲ್ಲಿ ಅಳವಡಿಸಿ ಈ ಉತ್ಸವಕ್ಕೆ ಸ್ವಾಗತ ಕೋರಲಾಗಿದೆ. ಇದು ಅಭಿನಂದನಿಯ ವಿಷಯವಾಗಿದೆ ಎಂದರು.

ಕನ್ನಡ ನಾಡಿನ ಕಲೆ ಸಾಹಿತ್ಯ ಸಿರಿವಂತಿಕೆಯಿಂದ ಕೂಡಿದೆ. ಹೀಗಾಗಿ ನಾವು ಈ ಉತ್ಸವದಲ್ಲಿ ಹಲವಾರು ಕಾರ್ಯಕ್ರಮ ರೂಪಿಸಿದ್ದೇವೆ. ಸಾರ್ವಜನಿಕರು ಎಲ್ಲ ಕಾರ್ಯಕ್ರಮಗಳನ್ನು ವೀಕ್ಷಿಸಬೇಕು. ಈ ಕಾರ್ಯಕ್ರಮಕ್ಕೆ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಕೋರಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಪಾಂಡೆಯ ಅವರು ಸ್ವಾಗತ ಮಾತುಗಳನ್ನಾಡಿದರು.

## ಶ್ರೀರಂಗದೇವರಾಯಲು ಸಾಂಸ್ಕೃತಿಕ ರಾಯಬಾರಿ: ದೊಡ್ಡನಗೌಡ ಪಾಟೀಲ

ಕೊಪ್ಪಳ ಮಾರ್ಚ್ : ಆನೆಗೊಂದಿ ಉತ್ಸವ ಆಚರಣೆಗೆ ನಾಂದಿ ಹಾಡಿದ ಶ್ರೀರಂಗದೇವರಾಯುಲು ಅವರು ಸಾಂಸ್ಕೃತಿಕ ರಾಯಬಾರಿಯಾಗಿದ್ದಾರೆ ಎಂದು ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ದೊಡ್ಡನಗೌಡ ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಗಂಗಾವತಿ ತಾಲೂಕಿನ ಆನೆಗೊಂದಿಯ ಉತ್ಸವ ಮೈದಾನದಲ್ಲಿ ಮಾರ್ಚ 11ರಂದು ನಡೆದ ಐತಿಹಾಸಿಕ ಆನೆಗೊಂದಿ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಇತಿಹಾಸವನ್ನು ನಾವು ತಿಳಿಯದಿದ್ದರೆ ಹೊಸ ಇತಿಹಾಸವನ್ನು ನಾವು ನಿರ್ಮಿಸಲಾಗದು ಎಂದು ಹೇಳಿದ ಡಾ.ಅಂಬೇಡ್ಕರ ಅವರ ಮಾತು ಅಕ್ಷರಶಃ ಸತ್ಯವಾಗಿದೆ. ಆನೆಗೊಂದಿಯು ಭವ್ಯ ಪರಂಪರೆ ಹೊಂದಿದ ನಾಡಾಗಿದೆ. ಆನೆಗೊಂದಿಯ ಇತಿಹಾಸ ಅರಿತಾಗ ಮಾತ್ರ ನಮಗೆ ಈ ಉತ್ಸವದ ಮಹತ್ವ ತಿಳಿಯುತ್ತದೆ. ಅಂದಿನ ಸಂಸದರಾದ ಹೆಚ್.ಜಿ.ರಾಮುಲು ಅವರು ಸಹ ಈ ಆನೆಗೊಂದಿ ಉತ್ಸವ ಆಚರಣೆಗೆ ಹೆಚ್ಚಿನ ಪ್ರೇರಣೆ ನೀಡಿದರು ಎಂದು ಅವರು ಸ್ಮರಿಸಿದರು.

## ಮಾ.15 ರಂದು ವಾಕ್ ಇನ್ ಇಂಟರ್‌ವ್ಯೂವ್

ಕೊಪ್ಪಳ, ಮಾರ್ಚ್ 12 : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕೊಪ್ಪಳದಲ್ಲಿ ಮಾರ್ಚ್ 15 ರಂದು ರಂದು ವಾಕ್ ಇನ್ ಇಂಟರ್‌ವ್ಯೂವ್ ಆಯೋಜಿಸಲಾಗಿದೆ. ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸಲಿದ್ದು, ತಮ್ಮಲ್ಲಿರುವ ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ಅಂದು ಬೆಳಿಗ್ಗೆ 10 ರಿಂದ 1:30 ಗಂಟೆಯವರೆಗೆ ವಾಕ್ ಇನ್ ಇಂಟರ್‌ವ್ಯೂವ್ ನಡೆಯಲಿದ್ದು, ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ. 18 ರಿಂದ 30 ವರ್ಷ ವಯೋಮಾನದ ಪಿಯುಸಿ/ತತ್ಸಮಾನ, ಐಟಿಐ, ಯಾವುದೇ ಪದವಿ ಅಭ್ಯರ್ಥಿಗಳಿಗೆ ನೇರ ಸಂದರ್ಶನ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಅರ್ಹ ವಿದ್ಯಾರ್ಹತೆ ಹೊಂದಿದ ಯುವಕ ಮತ್ತು ಯುವತಿಯರು, ನಿರುದ್ಯೋಗಿ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಿ ಉದ್ಯೋಗದ ನೆರವು ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ, ದೂ.ಸಂ: 08539-220859 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತ್ಸ್ಯವಾಹಿನಿ ಯೋಜನೆಯಡಿ ಮೀನು ಮಾರಾಟಗಾರರಿಂದ ಅರ್ಜಿ ಆಹ್ವಾನ

ಕೊಪ್ಪಳ, ಮಾರ್ಚ್ 12 : ಸ್ಥಳೀಯವಾಗಿ ಮೀನು ಸೇವನೆಯನ್ನು ಪ್ರೋತ್ಸಾಹಿಸಲು ಹಾಗೂ ತಾಜಾ ಮೀನು ಮತ್ತು ಮೀನು ಉತ್ಪನ್ನಗಳ ಮಾರಾಟಕ್ಕಾಗಿ ಮತ್ಸ್ಯವಾಹಿನ ಯೋಜನೆಯಡಿ ತ್ರಿಚಕ್ರ ವಾಹನಗಳನ್ನು ಪರವಾನಗೆ ಆಧಾರದಲ್ಲಿ ಪಡೆಯಲು ಆಸಕ್ತ ಮೀನು ಮಾರಾಟಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಕೊಪ್ಪಳ ಜಿಲ್ಲೆಗೆ 03 ಭೌತಿಕ ಗುರಿಗಳಿದ್ದು, ಆಯ್ಕೆಯಾಗುವ ಅರ್ಜಿದಾರರು ಇಲಾಖೆಗೆ ಭದ್ರತಾ ಠೇವಣಿ ಮೊತ್ತ (ರೂಪಾಯಿ 1.00 ಲಕ್ಷ ಸಾಮಾನ್ಯ ವರ್ಗದವರು, 0.50 ಲಕ್ಷ ಪರಿಶಿಷ್ಟ ಜಾತಿ/ಪಂಗಡ/ ಮಹಿಳೆ) ವನ್ನು ನೀಡಬೇಕಿರುತ್ತದೆ ಹಾಗೂ ಮಾಸಿಕ ರೂ.3,000/- ಬಾಡಿಗೆ ಮೊತ್ತವನ್ನು ಪಾವತಿಸಬೇಕಿರುತ್ತದೆ. ಅರ್ಜಿ ಸಲ್ಲಿಸಲು ಮಾರ್ಚ್ 16 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಗಂಗಾವತಿ, ಕೊಪ್ಪಳ, ಕುಷ್ಟಗಿ ಇವರನ್ನು ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ಆರ್‌ಸೆಟಿ ಸಂಸ್ಥೆಯಿಂದ ವಿವಿಧ ತರಬೇತಿಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ, ಮಾರ್ಚ್ 12 : ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಕೊಪ್ಪಳ ವತಿಯಿಂದ ಜಿಲ್ಲೆಯ ಗ್ರಾಮೀಣ ಭಾಗದ ಆಸಕ್ತರಿಗೆ ವಿದ್ಯುತ್ ಮೋಟಾರ್ ದುರಸ್ತಿ ಮತ್ತು ಸರ್ವಿಸ್, ಮೊಬೈಲ್ ರಿಪೇರಿ ಮತ್ತು ದುರಸ್ತಿ, ಕಂಪ್ಯೂಟರ್ ಡೆಸ್ಕ್‌ಟಾಪ್ ಪಬ್ಲಿಷಿಂಗ್ ಮತ್ತು ಕುರಿ ಸಾಕಾಣಿಕೆ ಕುರಿತು ಉಚಿತ ತರಬೇಯನ್ನು ನೀಡಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

30 ದಿನಗಳ ವಿದ್ಯುತ್ ಮೋಟಾರ್ ದುರಸ್ತಿ ಮತ್ತು ಸರ್ವಿಸ್ ತರಬೇತಿ, 30 ದಿನಗಳ ಮೊಬೈಲ್ ರಿಪೇರಿ ಮತ್ತು ದುರಸ್ತಿ, 45 ದಿನಗಳ ಕಂಪ್ಯೂಟರ್ ಡೆಸ್ಕ್‌ಟಾಪ್ ಪಬ್ಲಿಷಿಂಗ್ ತರಬೇತಿ, 10 ದಿನಗಳ ಕುರಿ ಸಾಕಾಣಿಕೆ ತರಬೇತಿಗಳನ್ನು ಊಟ ಮತ್ತು ವಸತಿಯೊಂದಿಗೆ ಉಚಿತವಾಗಿ ನೀಡಲಾಗುವುದು.ಕನಿಷ್ಠ ಎಂಟನೇ ತರಗತಿ ಉತ್ತೀರ್ಣರಾದ 18 ರಿಂದ 45 ವರ್ಷದೊಳಗಿನ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿದಾರರು ಜಿಲ್ಲೆಯ ಗ್ರಾಮೀಣ ಭಾಗದವರಾಗಿರಬೇಕು. ಸ್ವಯಂ ಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು. ಮಾರ್ಚ್ 20 ರಂದು ಸಂದರ್ಶನ ನಡೆಯಲಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾ.25 ರಿಂದ ತರಬೇತಿ ಆರಂಭಿಸಲಾಗುವುದು.ಆಸಕ್ತರು ಆಧಾರ್ ಕಾರ್ಡ, ರೇಶನ್ ಕಾರ್ಡ್, ಮಾರ್ಕ್ಸ್ ಕಾರ್ಡ್‌ಗಳ ಜೆರಾಕ್ಸ್ ಪ್ರತಿಗಳು ಹಾಗೂ 03 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ನಿರ್ದೇಶಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ ಆವರಣ, ಅಶೋಕ ಸರ್ಕಲ್ ಹತ್ತಿರ, ಕೊಪ್ಪಳ ವಿಳಾಸಕ್ಕೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08539-231038, 9483618178, 9481085217, 7259073827, 6364173983 ಗೆ ಸಂಪರ್ಕಿಸಬಹುದು ಎಂದು ಎಸ್‌ಬಿಐ ಆರ್‌ಸೆಟಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.